ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 24ನೇ ನವೆಂಬರ್, 2016

(ಸಮಯ ಬೆಳಗ್ಗೆ : 11.00 ಗಂಟೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ರಾಜ್ಯದಲ್ಲಿ ಬರಗಾಲ ಮತ್ತು ಕುಡಿಯುವ ನೀರಿನ ಸಮಸ್ಯೆ ಬಗ್ಗೆ ನಡೆದ ಚರ್ಚೆಗೆ – ಸರ್ಕಾರದ ಉತ್ತರ.

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಮತ್ತು ನಿರ್ಣಯಗಳ ಸಮಿತಿ) ಅವರು – 2016-17ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಹತ್ತನೇ ವರದಿಯನ್ನೊಪ್ಪಿಸುವುದು.

4. ಮಹದಾಯಿ ಕಳಸಾ ಬಂಡೂರಿ ನಾಲಾ ಯೋಜನೆ ಕುರಿತು – ವಿಶೇಷ ಚರ್ಚೆ

.....2

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:-

ಅ) 2016ನೇ ಸಾಲಿನ ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು:-

ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-

ಅ) 2016ನೇ ಸಾಲಿನ ಕರ್ನಾಟಕ ಕೆಲವು ಸ್ಥಳಗಳ ಹೆಸರುಗಳನ್ನು ಬದಲಾಯಿಸುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಶ್ರೀ ಕೆ.ಜೆ. ಜಾರ್ಜ್ (ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು) ಅವರು:-

ಅ) 2016ನೇ ಸಾಲಿನ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

.....3

5. ಶ್ರೀ ಬಿ. ರಮಾನಾಥ ರೈ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-

ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಅರಣ್ಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ಹಾಗೂ ಸ್ಥಳನಿಯುಕ್ತಿಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಗಮನ ಸೆಳೆಯುವ ಸೂಚನೆಗಳು

1. **ಡಾ|| ಎ.ಬಿ. ಮಾಲಕರೆಡ್ಡಿ ಅವರು** – ಪಡಿತರ ಚೀಟಿದಾರರಿಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಆಹಾರ ಧಾನ್ಯ ಪಡೆಯಲು ಕೂಪನ್ ಪದ್ಧತಿ ಜಾರಿಗೊಳಸಿದ ನಂತರ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸಳೆಯುವುದು.

2. **ಶ್ರೀ ಅರವಿಂದ ಚಂದ್ರಕಾಂತ ಬೆಲ್ಲದ ಅವರು** – ಹುಬ್ಬಳ್ಳಿ – ಧಾರವಾಡ ಕಾರ್ಪೋರೇಷನ್‌ಗೆ ನಗರಾಭಿವೃದ್ಧಿ ಇಲಾಖೆಯಿಂದ ಕಳೆದ 2 ವರ್ಷದಲ್ಲಿ ಸುಮಾರು 70 ಕೋಟಿಯಷ್ಟು ನಿವೃತ್ತ ನೌಕರರ ಪಿಂಚಣಿ ಹಣ ಮರುಪಾವತಿಯಾಗದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

3. **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿರುವ ಅಂಗನವಾಡಿಗಳಿಗೆ ನಿರ್ದಿಷ್ಟಪಡಿಸಿದ ಆಹಾರ ಸಮರ್ಪಕವಾಗಿ ಪೂರೈಕೆಯಾಗದಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸಳೆಯುವುದು.

4. **ಡಾ|| ಸಿ.ಎನ್. ಅಶ್ವಥ್ ನಾರಾಯಣ ಅವರು** – ನಿಯಮಬಾಹಿರವಾಗಿ ತೋಟಗಾರಿಕೆ ಇಲಾಖೆಯಲ್ಲಿ ಸೃಜಿಸಿರುವ ವಿಭಾಗೀಯ ಮಟ್ಟದ ಹುದ್ದೆಗಳನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

5. **ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ ಅವರು** - ನಿಪ್ಪಾಣಿ ವಿಧಾನಸಭಾ ಮತ ಕ್ಷೇತ್ರದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ವೈದ್ಯಕೀಯ ಸಿಬ್ಬಂದಿ ಹಾಗೂ ಸೌಲಭ್ಯಗಳು ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

.....3

6. **ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು** – ಶಿವಮೊಗ್ಗ ನಗರದಲ್ಲಿ ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಸೀಮೆಎಣ್ಣೆ ವಿತರಣೆಯಾಗದೇ ತೊಂದರೆಯುಂಟಾಗುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

7. ಖಾಸಗಿ ಸದಸ್ಯರ ಕಾರ್ಯಕಲಾಪ

ಖಾಸಗಿ ಸದಸ್ಯರ ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) **ಅವರು:-**

ಅ) 2015ನೇ ಸಾಲಿನ ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕವನ್ನು (**2015ರ ಖಾಸಗಿ ಸದಸ್ಯರ ವಿಧೇಯಕ-02)** ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಸ್.ಮೂರ್ತಿ
ಕಾರ್ಯದರ್ಶಿ (I/C)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm